72(241) ಶ್ರೀ ಶಿವಶಂಕರ್‌ರೆಡ್ಡಿ ಎಲ್.ಹೆಚ್. (ಗೌರಿಬಿದನೂರು): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಕೇವಲ ಎರಡು ಜೂನಿಯರ್ ಕಾಲೇಜುಗಳು ಇರುವುದು ನಿಜವಲ್ಲವೇ:

ಆ) ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಒಂದೂ ಇಲ್ಲದೇ ಈ ಭಾಗದ ಬಡ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಇ) ಈ ಬಗ್ಗೆ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆ ಮಂಡಿಸಿದ್ದರೂ ಮಂಜೂರಾಗದೇ ಇರುವುದು ನಿಜವಲ್ಲವೇ:

ಈ) 2006–07ನೇ ಸಾಲಿನ ಆಯವ್ಯಯದಲ್ಲಿ ಹಣ ಮಂಜೂರು ಮಾಡಿ ಪ್ರಥಮ ದರ್ಜೆ ಕಾಲೇಜುಗಳನ್ನು ಸ್ಥಾಪಿಸಿ ಬಡ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಿಕೊಡಲಾಗುವುದೇ:

ಶ್ರೀ ಡಿ.ಎಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇಲ್ಲದಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಆದರೆ ಎರಡು ಖಾಸಗಿ ಅನುದಾನಿತ ಕಾಲೇಜುಗಳು ಇರುತ್ತದೆ. (ಎ.ಇ.ಎಸ್. ನ್ಯಾಷನಲ್ ಕಾಲೇಜು ಮತ್ತು ಆಚಾರ್ಯ ಮಹಿಳಾ ಪ್ರಥಮ ದರ್ಜೆ ಕಾಲೇಜು)

ಇ) ಸರ್ಕಾರದಿಂದಲೇ ವೇತನ ಅನುದಾನ ಪಡೆಯುತ್ತಿರುವ ಎರಡು ಕಾಲೇಜುಗಳು ಇರುವುದರಿಂದ ಸರ್ಕಾರಿ ಕಾಲೇಜನ್ನು ಮಂಜೂರು ಮಾಡುವ ವಿಷಯವನ್ನು ಪರಿಶೀಲಿಸಲಾಗುತ್ತಿಲ್ಲ.

ಈ) ಉದ್ಭವಿಸುವುದಿಲ್ಲ.

73 (151) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ವಸತಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಗ್ರಾಮೀಣ ಪ್ರದೇಶದಲ್ಲಿರುವ ಬಡಜನರಿಗೆ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಉಚಿತವಾಗಿ ಹಂಚಲಾಗಿರುವ ನಿವೇಶನಗಳ ಸಂಖ್ಯೆ ಎಷ್ಟು: (ಜಿಲ್ಲಾವಾರು ಮಾಹಿತಿ ಒದಗಿಸುವುದು)

ಆ) ಇದಕ್ಕಾಗಿ ಉಚಿತ ನಿವೇಶನಕಾಂಕ್ಷಿಗಳ ಸಂಖ್ಯೆ ಎಷ್ಟು: ಈ ಬೇಡಿಕೆಗಳನ್ನು ಪೂರೈಸಲು ಸರ್ಕಾರ ಯಾವ ಕಾಲಮಿತಿಯನ್ನು ಹಾಕಿಕೊಳ್ಳಲಾಗಿದೆ:

ಇ) ರಾಜ್ಯದ ಕಡುಬಡವರಿಗೆ ಎಷ್ಟು ಮನೆಗಳನ್ನು ನಿರ್ಮಿಸಲು ಸರ್ಕಾರ ನಿರ್ಧರಿಸಿದೆ ಇದಕ್ಕಾಗಿ ಬೇಡಿಕೆಯಿರುವ ಸಂಖ್ಯೆ ಎಷ್ಟು : (ಜಿಲ್ಲಾವಾರು) ಮಾಹಿತಿ ಒದಗಿಸುವುದು)?

ಶ್ರೀ ಡಿ.ಟಿ. ಜಯಕುಮಾರ್ (ವಸತಿ ಸಚಿವರು) :

ಅ) ರಾಜ್ಯದಲ್ಲಿ ಗ್ರಾಮೀಣ ಪ್ರದೇಶದಲ್ಲಿರುವ ಬಡಜನರಿಗೆ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಉಚಿತವಾಗಿ ಹಂಚಲಾಗಿರುವ ನಿವೇಶನಗಳ ಸಂಖ್ಯೆ 13236 ಜಿಲ್ಲಾವಾರು ವಿವರವನ್ನು ಅನುಬಂಧ 'ಅ'ದಲ್ಲಿ ನೀಡಲಾಗಿದೆ.